ದಿನಾಂಕ 20.12.2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ವಾದಿ ಪರ ಶ್ರೀ.ಬಿ.ಸಿ.ಡಿ ವಕೀಲ ರಿಂದ**

ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಸಂಗತಿಗಳು ಸತ್ಯವಾಗಿರುತ್ತವೆ. ನಾನು ಅದನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಈ ದಾವೆಗೆ ಸಂಬಂದಪಟ್ಟ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

1. ದಿನಾಂಕ 27.01.2021 ರಂದು ಪೊಲೀಸರು ನೀಡಿದ ಸ್ವೀಕೃತಿಯನ್ನು ನಿಪಿ 1 ಎಂದು,

2. ದಿನಾಂಕ 09.07.2021 ರಂದು ಪ್ರತಿವಾದಿಗಳಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ನಿಪಿ 2 ಎಂದು,

3. 1 ನೇ ಪ್ರತಿವಾದಿ ನೀಡಿದ ಜವಾಬು ನೋಟಿಸನ್ನು ನಿಪಿ 3 ಎಂದು ಗುರುತಿಸಲಾಯಿತು.

ಈ ಎಲ್ಲಾ ಕಾರಣಗಳಿಂದ ನಾನು ಸಲ್ಲಿಸಿರುವ ದಾವೆಯನ್ನು ಡಿಕ್ರಿ ಮಾಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

ಪಾಟೀ ಸವಾಲು: ಪ್ರತಿವಾದಿಗಳು ಲಿಖಿತ ಹೇಳಿಕೆ ಸಲ್ಲಿಸದೇ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಸಾಕ್ಷಿಗೆ ಓದಿ ಹೇಳಿ ಕೇಳಿ ಸರಿ ಇದೆ.

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ ಕೆ.ಆರ್.ಪೇಟೆ.